ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

2

ಇಲಾಖೆ / ವಿಷಯ : DEPARTMENT / SUBJECT: ರಾಜ್ಯಪಾಲರು

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE: 20/4/21

# ರಾಜ್ಯಪಾಲರ ಅಧ್ಯಕ್ಷತೆಯಲ್ಲಿ ಸದನ ನಾಯಕರ ಸಭೆ ಇಂದು

**ಬೆಂಗಳೂರು:** ರಾಜ್ಯದಲ್ಲಿ ಕೋವಿಡ್ ನಿಯಂತ್ರಣ ಸಂಬಂಧ ಚರ್ಚಿಸಲು ರಾಜ್ಯಪಾಲರ ನೇತೃತ್ವದಲ್ಲಿ ವಿಧಾನಮಂಡಲದ ಉಭಯ ಸದನಗಳ ಅಧ್ಯಕ್ಷರು, ಸಿಎಂ ಪ್ರತಿಪಕ್ಷದ ನಾಯಕರು ಹಾಗೂ ನಾನಾ ರಾಜಕೀಯ ಪಕ್ಷಗಳ ಮುಖಂಡರ ಸಭೆ ಮಂಗಳವಾರ ನಡೆಯಲಿದೆ.



ಸರ್ವಪಕ್ಷಗಳ ಮುಖಂಡರನ್ನು ಒಳಗೊಂಡು ರಾಜ್ಯಪಾಲರ ಅಧ್ಯಕ್ಷತೆಯಲ್ಲಿ ನಡೆಯುತ್ತಿರುವ ಅಪರೂಪದ ಸಭೆ ಇದಾಗಿದೆ. ಸಿಎಂ ಬಿ.ಎಸ್.ಯಡಿಯೂರಪ್ಪ ಅಧ್ಯಕ್ಷತೆಯ ಸರ್ವಪಕ್ಷ ಸಭೆ ಕಳೆದ ಭಾನುವಾರವೇ ನಡೆಯಬೇಕಿತ್ತು. ಕೋವಿಡ್ ಪಾಸಿಟಿವ್ ಕಾರಣ ಸಿಎಂ ಆಸ್ಪತ್ರೆಗೆ ದಾಖಲಾದದ್ದರಿಂದ ಈ ಸಭೆ ಮುಂದೂಡಿಕೆಯಾಗಿತ್ತು. ಇದರ ಮಧ್ಯೆ ರಾಜ್ಯಪಾಲರ ನೇತೃತ್ವದಲ್ಲಿ ಸರ್ವಪಕ್ಷಗಳ ಸಭೆ ನಿಗದಿಯಾಗಿದೆ.

ವರ್ಚುವಲ್ ಸಭೆಯಲ್ಲಿ ಸಿಎಂ ಬಿ.ಎಸ್.ಯಡಿಯೂರಪ್ಪ ಅವರೂ ಭಾಗಿಯಾಗಲಿದ್ದಾರೆ. ಸಭಾಪತಿ ಬಸವರಾಜ ಹೊರಟ್ಟಿ, ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ, ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ, ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಎಚ್.ಡಿ.ಕುಮಾರಸ್ವಾಮಿ, ವಿಧಾನ ಪರಿಷತ್ ಪ್ರತಿಪಕ್ಷದ ನಾಯಕ ಎಸ್.ಆರ್.ಪಾಟೀಲ್ ಹಾಗೂ ತಜ್ಞರಿಗೂ ಸಭೆಯಲ್ಲಿ ಪಾಲ್ಗೊಳ್ಳಲು ಆಹ್ವಾನ ನೀಡಲಾಗಿದೆ.



ಲೋಕಸಭಾಧ್ಯಕ್ಷ ಓಂ ಬಿರ್ಲಾ ಜತೆಗಿನ ವರ್ಚುವಲ್ ಸಭೆಯಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿದರು.